719 (291) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) – ಮಾನ್ಯ ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ನಾಲ್ಕೈದು ವರ್ಷಗಳಿಂದ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರಕ್ಕೆ ಆರಾಧನಾ ಯೋಜನೆಯಡಿ ಬಿಡುಗಡೆ ಮಾಡಿರುವ ಅನುದಾನ ಖರ್ಚಾಗದೇ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು ?

ಶ್ರೀ ಬಿ. ನಾಗರಾಜಶೆಟ್ಟಿ (ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು) :

ಅ) ಬಾಗೇಪಲ್ಲಿ ವಿಧಾನ ಸಭಾ ಕ್ಷೇತ್ರಕ್ಕೆ ಆರಾಧನಾ ಯೋಜನೆಯಡಿ ಅನುದಾನದ ವಿವರ ಈ ಕೆಳಕಂಡಂತೆ ಇರುತ್ತದೆ :

1.	2002–03	ರೂ.2,05,356–00
2.	2003–04	ರೂ.53,571–00
3.	2004–05	ರೂ.2,82,000–00
4.	2005–06	ರೂ.1,65,000–00
5.	2006–07	ರೂ.9,92,927–00

ಮೇಲ್ಕಂಡ ಅನುದಾನದಲ್ಲಿ 2002–03ನೇ ಸಾಲಿನಲ್ಲಿ ರೂ.108486/– ಗಳು ಖರ್ಚು ಮಾಡಲಾಗಿದ್ದು, ಉಳಿದ ರೂ.8,84,441–00 ಬಾಕಿ ಉಳಿದಿರುತ್ತದೆ.

ಆ) 2002–03ನೇ ಸಾಲಿನಲ್ಲಿ ಸಮಿತಿ ರಚನೆಯಾಗಿದ್ದು, ನಂತರ ಸಮಿತಿ ರದ್ದುಪಡಿಸಲಾಗಿರುತ್ತದೆ. ಈವರೆವಿಗೆ ಬಾಗೇಪಲ್ಲಿ ವಿಧಾನ ಸಭಾ ಕ್ಷೇತ್ರದ ಆರಾಧನಾ ಸಮಿತಿಯು ರಚನೆಯಾಗಿರುವುದಿಲ್ಲ. ಸಮಿತಿಯು ರಚನೆಯಾದ ಕೂಡಲೇ ಸಭೆಯನ್ನು ಕರೆದು ಅನುದಾನವನ್ನು ಖರ್ಚು ಮಾಡಲು ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

720 (1132) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) – ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2006–07ನೇ ಸಾಲಿನಲ್ಲಿ 2006 ಡಿಸೆಂಬರ್ ಅಂತ್ಯದವರೆಗೆ ಆತ್ಮಹತ್ಯೆ ಮಾಡಿಕೊಂಡಿರುವ ರೈತರ ಸಂಖ್ಯೆ ಎಷ್ಟು ;

ಆ) 2006 ಡಿಸೆಂಬರ್ ಅಂತ್ಯದವರೆಗೆ ಆತ್ಮಹತ್ಯೆ ಮಾಡಿಕೊಂಡಿರುವ ರೈತ ಕುಟುಂಬಗಳಿಗೆ ನೀಡಿರುವ ಪರಿಹಾರ ಹಣ ಎಷ್ಟು ;

ಇ) ರೈತರ ಆತ್ಮಹತ್ಯೆಗಳನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಬಂಡೆಪ್ಪ ಕಾಶಂಪೂರ್ (ಕೃಷಿ ಸಚಿವರು) :

ಅ) 2006–07ನೇ ಸಾಲಿನಲ್ಲಿ ಡಿಸೆಂಬರ್ ಅಂತ್ಯದವರೆಗೆ 159 ರೈತರ ಆತ್ಮಹತ್ಯೆ ಪ್ರಕರಣ ವರದಿಯಾಗಿರುತ್ತದೆ.

ಆ) 2006ರ ಡಿಸೆಂಬರ್ ಅಂತ್ಯದವರೆಗೆ 62 ಅರ್ಹ ಪ್ರಕರಣಗಳಿಗೆ ರೂ.62.00 ಲಕ್ಷ ಪರಿಹಾರ ನೀಡಲಾಗಿದೆ.

ಇ) ರೈತರ ಆತ್ಮಹತ್ಯೆ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳು ಇಂತಿವೆ:

ಅ) ಶೇ.4ರ ಬಡ್ಡಿ ದರದಲ್ಲಿ ಸಹಕಾರಿ ಸಂಸ್ಥೆಗಳ ಮೂಲಕ ರೈತರಿಗೆ ಸಾಲ ನೀಡುವುದು.

ಆ) ಶೇ.75ರ ರಿಯಾಯಿತಿ ದರದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಬಿತ್ತನೆ ಬೀಜ ವಿತರಿಸುವುದು.

ಇ) ಬೆಂಬಲ ಬೆಲೆಗಿಂತ ಮಾರುಕಟ್ಟೆಯಲ್ಲಿ ಕೃಷಿ ಉತ್ಪನ್ನಗಳ ದರವು ಕುಸಿದಲ್ಲಿ ಮಾರುಕಟ್ಟೆ ಮಧ್ಯಪ್ರದೇಶದ ಮೂಲಕ ರೈತರ ಕೃಷಿ ಉತ್ಪನ್ನಗಳ ಖರೀದಿ.

ಈ) ಟ್ರಾಕ್ಟರ್, ಪವರ್ ಟಿಲ್ಲರ್‌ಗಳಿಗೆ ಶೇ.50ರ ರಿಯಾಯಿತಿ ದರದಲ್ಲಿ ವಿತರಣೆ.

ಉ) ಎತ್ತು ಮತ್ತು ಬಂಡಿಯನ್ನು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಶೇ.50ರ ರಿಯಾಯಿತಿಯಲ್ಲಿ ವಿತರಣೆ.

ಊ) ಕೃಷಿ ತಾಂತ್ರಿಕತೆಯ ಬಗ್ಗೆ ರೈತರಿಗೆ ತರಬೇತಿ.

ಎ) ರಿಯಾಯಿತಿಯಲ್ಲಿ ಹನಿ ನೀರಾವರಿ ಮತ್ತು ತುಂತುರು ನೀರಾವರಿ ಉಪಕರಣಗಳ ವಿತರಣೆ.

ಏ) ಸಾಗುವಳಿ ವೆಚ್ಚ ಕಡಿಮೆ ಮಾಡಲು ಸಾವಯವ ಕೃಷಿ ಮತ್ತು ಜೀವಾಣು ಗೊಬ್ಬರ ಪ್ರೋತ್ಸಾಹ.

ಐ) ಮೆಣ್ಣು ಪರೀಕ್ಷೆಯ ಆಧಾರದ ಮೇಲೆ ಮಣ್ಣಿನ ಫಲವತ್ತತೆ ಹೆಚ್ಚಿಸಲು ಕ್ರಮ.

ಒ) ರೈತರ ಆತ್ಮಹತ್ಯೆ ಪ್ರಕರಣಗಳು ಒಳಗೊಂಡಿರುವ 6 ಜಿಲ್ಲೆಗಳಾದ ಶಿವಮೊಗ್ಗ, ಚಿತ್ರದುರ್ಗ, ಬೆಳಗಾಂ, ಹಾಸನ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಭಾರತ ಸರ್ಕಾರದ ವಿಶೇಷ ಪ್ಯಾಕೇಜ್ ಇತ್ಯಾದಿ.

721 (536) : ಶ್ರೀ ಸುರೇಶ್ ಎಸ್. ಮಾರಿಹಾಳ (ಕಿತ್ತೂರು) – ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೈಲಹೊಂಗಲ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ 2006-07ನೇ ಸಾಲಿನ ವಾರ್ಷಿಕ ಕ್ರಿಯಾಯೋಜನೆಯಲ್ಲಿ ರೂ. 42.50 ಲಕ್ಷಗಳನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದಲ್ಲಿದೆಯೇ ;

ಆ) ಹಾಗಿದ್ದಲ್ಲಿ, ಮಂಜೂರಾತಿ ವಿಳಂಬಕ್ಕೆ ಕಾರಣವೇನು ;

ಇ) ತ್ವರಿತವಾಗಿ ಮಂಜೂರಾತಿ ನೀಡಲು ಕ್ರಮಕೈಗೊಳ್ಳಲಾಗುವುದೇ ?

ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು) :

ಅ) ಆ) ಮತ್ತು ಇ) ಬೈಲಹೊಂಗಲ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ 2006-07ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ರೂ.42.50 ಲಕ್ಷಗಳ ಮೊತ್ತದ ಹೊಸ ಕಾಮಗಾರಿಗಳು ಮತ್ತು ರೂ.80.06 ಲಕ್ಷಗಳ ಮೊತ್ತದ ಮುಂದುವರೆದ ಕಾಮಗಾರಿಗಳು ಸೇರಿದಂತೆ ಒಟ್ಟು ರೂ.122.56 ಲಕ್ಷಗಳ ಮೊತ್ತದ ಪ್ರಸ್ತಾವನೆಯನ್ನು ಅನುಮೋದನೆಗೆ ಕೃಷಿ ಮಾರುಕಟ್ಟೆ ಆಯುಕ್ತರಿಗೆ ಸಲ್ಲಿಸಿದ್ದು, ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಸಮಿತಿಯ 2006-07ನೇ ಸಾಲಿನಲ್ಲಿ ಎಲ್ಲಾ ಮೂಲಗಳಿಂದ ನಿರೀಕ್ಷಿತ ಆದಾಯ ಸುಮಾರು ರೂ.39.00 ಲಕ್ಷಗಳೆಂದು ಅಂದಾಜಿಸಿದ್ದು, ಸಮಿತಿ ಕಳುಹಿಸಿರುವ ರೂ. 122.56 ಲಕ್ಷಗಳ ಪ್ರಸ್ತಾವನೆಯನ್ನು ಆದ್ಯತೆ ಹಾಗೂ ಆದಾಯಕ್ಕನುಗುಣವಾಗಿ ಪುನರ್ ಪರಿಶೀಲಿಸಿ ಮಂಡಿಸಲು ತಿಳಿಸಲಾಗಿದೆ. ಪರಿಷ್ಕೃತ ಪ್ರಸ್ತಾವನೆ ಬಂದ ನಂತರ ಅನುಮೋದನೆ ನೀಡಲು ಕ್ರಮ ತೆಗೆದುಕೊಳ್ಳಲಾಗುವುದು.